**All India Radio: Bangalore**
**Regional Bulletin In Kannada**
**08.11.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**08.11.2025 / 2.30 p.m.**
**<><><><>**

ಮುಖ್ಯಾಂಶಗಳು

1. ಬೆಂಗಳೂರು ಎರ್ನಾಕುಲಂ ವಂದೇ ಭಾರತ್ ರೈಲಿಗೆ ವಾರಾಣಸಿಯಲ್ಲಿ ಪ್ರಧಾನಿ ವರ್ಚುವಲ್ ಮೂಲಕ ಚಾಲನೆ
2. ರಾಜ್ಯದ ವಿವಿಧೆಡೆ ದಾಸ ಶ್ರೇಷ್ಠ ಕನಕದಾಸ ಜಯಂತಿ ಆಚರಣೆ
3. ಕೇಂದ್ರ ಸರ್ಕಾರದಿಂದ ಚುನಾವಣಾ ಆಯೋಗದ ದುರ್ಬಳಕೆ - ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪ
4. ಮಾಲೂರು ವಿಧಾನಸಭಾ ಕ್ಷೇತ್ರದ ಮರು ಎಣಿಕೆ : ವೀಕ್ಷಕರಾಗಿ ಉತ್ತರಪ್ರದೇಶದ ಐಎಎಸ್ ಅಧಿಕಾರಿ ಪ್ರಭು ನಾರಾಯಣ ಸಿಂಗ್ ನೇಮಕ

<><><><>

ಪ್ರಧಾನಿ ನರೇಂದ್ರ ಮೋದಿ ವಾರಾಣಸಿಯಲ್ಲಿಂದು ಬೆಂಗಳೂರು-ಎರ್ನಾಕುಲಂ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ವರ್ಚುವಲ್ ಮೂಲಕ ಹಸಿರು ನಿಶಾನೆ ತೋರಿದ್ದಾರೆ. ಇದೇ ವೇಳೆ ಮಾತನಾಡಿದ ಅವರು, ವಂದೇ ಭಾರತ್, ನಮೋ ಭಾರತ್ ಮತ್ತು ಅಮೃತ್ ಭಾರತ್ ನಂತಹ ರೈಲುಗಳು ಮುಂದಿನ ಪೀಳಿಗೆಗೆ ಅಡಿಪಾಯ ಹಾಕುತ್ತಿವೆ ಎಂದು ತಿಳಿಸಿದ್ದಾರೆ.

**ಧ್ವನಿ : ನರೇಂದ್ರ ಮೋದಿ (೩೪ ಸೆಕೆಂಡ್‌ಗಳು)**

ಕೇರಳ, ತಮಿಳುನಾಡು, ಕರ್ನಾಟಕಕ್ಕೆ ಸಂಪರ್ಕ ಕಲ್ಪಿಸುವ ಈ ರೈಲು ಚೆನ್ನೈನಲ್ಲಿರುವ ದಕ್ಷಿಣ ರೈಲ್ವೆ ವ್ಯಾಪ್ತಿಗೆ ಒಳಪಡಲಿದೆ. ನಾಳೆ ದೈನಂದಿನ ಸಂಚಾರವನ್ನು ಆರಂಭಿಸಲಿದೆ. ಬುಧವಾರ ಹೊರತುಪಡಿಸಿ ಪ್ರತಿದಿನ ಬೆಳಗ್ಗೆ ೫.೧೦ಕ್ಕೆ ಕೆ.ಎಸ್.ಆರ್. ಬೆಂಗಳೂರಿನಿಂದ ಈ ರೈಲು ಹೊರಡಲಿದ್ದು, ಅದೇ ದಿನ ಮಧ್ಯಾಹ್ನ ೧.೫೦ಕ್ಕೆ ಎರ್ನಾಕುಲಂ ತಲುಪಲಿದೆ. ಮಧ್ಯಾಹ್ನ ೨.೨೦ಕ್ಕೆ ಎರ್ನಾಕುಲಂನಿಂದ ಹೊರಡುವ ರೈಲು ರಾತ್ರಿ ೧೧ ಗಂಟೆಗೆ ಕೆಎಸ್‌ಆರ್ ಬೆಂಗಳೂರಿಗೆ ಬರಲಿದೆ. ಕೇರಳ, ತಮಿಳುನಾಡು, ಕರ್ನಾಟಕದಲ್ಲಿ ಸಂಚರಿಸುವ ಈ ರೈಲು ೮ ಕೋಚ್‌ಗಳನ್ನು ಒಳಗೊಂಡಿರಲಿದೆ.

<><><><>

ಕನಕದಾಸರು ಕೇವಲ ಭಕ್ತರಾಗಿರದೇ ಒಬ್ಬ ದಾರ್ಶನಿಕ ವ್ಯಕ್ತಿಯಾಗಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ದಾಸಶ್ರೇಷ್ಠ ಕನಕದಾಸರ ಜಯಂತಿಯ ಅಂಗವಾಗಿ ಬೆಂಗಳೂರಿನ ಶಾಸಕರ ಭವನದ ಆವರಣದಲ್ಲಿರುವ ಕನಕದಾಸರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಸಂತ ಕನಕದಾಸರ ಜಯಂತಿಯನ್ನು ಸರ್ಕಾರ ಶ್ರದ್ಧಾಭಕ್ತಿಗಳಿಂದ ರಾಜ್ಯಾದ್ಯಂತ ಆಚರಿಸುತ್ತಿದೆ. ಕನಕದಾಸರ ಸಂದೇಶಗಳನ್ನು ಈ ನಾಡಿನ ಜನತೆಗೆ ತಿಳಿಸುವಂತಹ ಪ್ರಯತ್ನ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

ಧ್ವನಿ : ಸಿದ್ದರಾಮಯ್ಯ (೩೭ ಸೆಕೆಂಡ್‌ಗಳು)

ಇದೇ ವೇಳೆ ಸಕ್ಕರೆ ಕಾರ್ಖಾನೆ ಮಾಲೀಕರ ಸಮ್ಮುಖದಲ್ಲಿಯೇ ಪ್ರತಿ ಟನ್ ಕಬ್ಬಿಗೆ ೩ ಸಾವಿರದ ೩೦೦ ರೂಪಾಯಿ ದರ ನಿಗದಿಪಡಿಸಲಾಗಿದೆ. ೫೦ ರೂಪಾಯಿಗಳನ್ನು ಕಾರ್ಖಾನೆ ಮಾಲೀಕರು ನೀಡಬೇಕೆಂದು ಸೂಚನೆ ನೀಡಲಾಗಿದೆ. ಸರ್ಕಾರ ೫೦ ರೂಪಾಯಿ ಪ್ರೋತ್ಸಾಹಧನ ಪಾವತಿಸಲಿದೆ. ೧೦.೨೫ ರಿಕವರಿ ಇದ್ದರೆ, ೩ ಸಾವಿರದ ೧೦೦ ರೂಪಾಯಿ ಜೊತೆಗೆ ೧೦೦ ರೂಪಾಯಿಗಳು ಹಾಗೂ ೧೧.೨೫ ರಿಕವರಿ ಇದ್ದರೆ, ೩ ಸಾವಿರದ ೨೦೦ ರೂಪಾಯಿ ಜೊತೆಗೆ ೧೦೦ ರೂಪಾಯಿ ಸೇರಿದಂತೆ ಒಟ್ಟು ೩ ಸಾವಿರದ ೩೦೦ ರೂಪಾಯಿ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಪರಪ್ಪನ ಅಗ್ರಹಾರದಲ್ಲಿ ಕೈದಿಗಳಿಗೆ ರಾಜಾತಿತ್ಯ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಈ ಬಗ್ಗೆ ಪರಿಶೀಲಿಸಲಾಗುವುದು ಎಂದು ತಿಳಿಸಿದ್ದಾರೆ.

<><><><>

ರಾಜ್ಯದ ವಿವಿಧೆಡೆ ಇಂದು ದಾಸಶ್ರೇಷ್ಠ ಕನಕದಾಸರ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಯಿತು. ಹಾವೇರಿ ಜಿಲ್ಲೆ ಬ್ಯಾಡಗಿ ತಾಲ್ಲೂಕಿನ ಕಾಗಿನೆಲೆಯಲ್ಲಿಂದು ಭಕ್ತ ಶ್ರೇಷ್ಠ ಕನಕದಾಸರ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು. ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕ ಬಸವರಾಜ ಶಿವಣ್ಣವರ, ಗ್ಯಾರಂಟಿ ಯೋಜನೆಗಳ ರಾಜ್ಯ ಉಪಾಧ್ಯಕ್ಷ ಎಸ್.ಆರ್.ಪಾಟೀಲ, ಮಾಜಿ ಸಚಿವ ಆರ್.ಶಂಕರ್, ಜಿಲ್ಲಾಧಿಕಾರಿ ಡಾ.ವಿಜಯಕುಮಾರ್ ದಾನಮ್ಮನವರ ಕನಕದಾಸರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಈ ವೇಳೆ ಮಾತನಾಡಿದ ಶಾಸಕ ಬಸವರಾಜ ಶಿವಣ್ಣವರ, ಸಾಮಾಜಿಕ ನ್ಯಾಯ ಎತ್ತಿ ಹಿಡಿದ ದಾರ್ಶನಿಕ, ಕನಕದಾಸರು ಎಂದು ತಿಳಿಸಿದರು. ದಾಸಶ್ರೇಷ್ಠ ಕನಕದಾಸರ ಬರವಣಿಗೆ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದೆ, ಇಂತಹ ಮಹಾನ್ ಮಾನವತಾವಾದಿ ನಮ್ಮ ರಾಜ್ಯದಲ್ಲಿ ಹುಟ್ಟಿರುವುದು ಹೆಮ್ಮೆ ಎಂದು ಹಾಸನ ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ತಿಳಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕನಕದಾಸ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು. ಶಾಸಕ ಧೀರಜ್ ಮುನಿರಾಜು ಮಾತನಾಡಿ, ಕನಕದಾಸರು ಸಮಾಜದ ಅಂಕು-ಡೊಂಕುಗಳನ್ನು ತಮ್ಮ ಸಾಹಿತ್ಯದ ಮೂಲಕ ತಿದ್ದಲು ಶ್ರಮಿಸಿದ ಮಹನೀಯರು ಎಂದು ಸ್ಮರಿಸಿದರು. ವಿಶ್ವಮಾನವ ಪ್ರಜ್ಞೆಯ ಪ್ರತೀಕವಾದ ಕನಕದಾಸರ ಕೀರ್ತನೆಗಳು ಸಾಮಾಜಿಕ ನ್ಯಾಯ ಮತ್ತು ಸಮಾನತೆಯನ್ನು ಸಾರುವ ತತ್ವಪದಗಳಾಗಿ ಜನಮನದಲ್ಲಿ ಚಿರಸ್ಥಾಯಿಯಾಗಿವೆ ಎಂದು ಬೆಂಗಳೂರು ನಗರ ವಿಶ್ವವಿದ್ಯಾ ನಿಲಯದ ಕುಲಪತಿ ಪ್ರೊಫೆಸರ್ ಬಿ. ರಮೇಶ್ ಪ್ರತಿಪಾದಿಸಿದ್ದಾರೆ. ಕನಕದಾಸರ ತತ್ವ ಚಿಂತನೆಗಳ ಬಗ್ಗೆ ವಿಶ್ವವಿದ್ಯಾಲಯದಲ್ಲಿ ವಿಶೇಷ ಅಧ್ಯಯನ ನಡೆಸುವಂತೆ ಸಲಹೆ ನೀಡಿದ್ದಾರೆ. ಚಿಕ್ಕಮಗಳೂರು ನಗರದ ಕುವೆಂಪು ಕಲಾ ಮಂದಿರದಲ್ಲಿ ಜಿಲ್ಲಾಡಳಿತದ ವತಿಯಿಂದ ಕನಕದಾಸ ಜಯಂತಿ ಕಾರ್ಯಕ್ರಮ ನಡೆಯಿತು. ಶಾಸಕ ಹೆಚ್.ಡಿ ತಮ್ಮಯ್ಯ, ಪರಿಷತ್ ಸದಸ್ಯ ಸಿ.ಟಿ ರವಿ, ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಂಡಿದ್ದರು.

<><><><>

ಕೇಂದ್ರ ಸರ್ಕಾರ ಚುನಾವಣಾ ಆಯೋಗವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಕೆಪಿಸಿಸಿ ಕಚೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ,

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜಂಟಿ ಸುದ್ದಿಗೋಷ್ಠಿ ನಡೆಸಿ, ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಂವಿಧಾನ ಬಾಹಿರವಾಗಿ ಅಧಿಕಾರ ಹಿಡಿಯುವುದು ಸಂವಿಧಾನಕ್ಕೆ ಎಸಗುವ ದ್ರೋಹ. ಬಿಜೆಪಿ ಮತಗಳ್ಳತನದ ಮೂಲಕ ಅನೇಕ ವಿಧಾನಸಭೆ ಮತ್ತು ಲೋಕಸಭೆಯಲ್ಲಿ ಅಧಿಕಾರಕ್ಕೆ ಬಂದಿರುವುದು ಸ್ಪಷ್ಟವಾಗಿ ಗೋಚರಿಸಿದೆ ಎಂದು ಮುಖ್ಯಮಂತ್ರಿ ಆರೋಪಿಸಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಒಂದು ಲಕ್ಷಕ್ಕೂ ಅಧಿಕ ಮತ ದುರ್ಬಳಕೆಯಾಗಿದೆ ಎಂದು ಆಪಾದಿಸಿದ್ದಾರೆ. ಕಲಬುರಗಿ ಆಳಂದ ಕ್ಷೇತ್ರದಲ್ಲಿ ಮತಗಳ್ಳತನಕ್ಕೆ ಬೇರೆ ರಾಜ್ಯಗಳ ಮೊಬೈಲ್ ಸಂಖ್ಯೆ ಬಳಕೆ ಮಾಡಿರುವುದು ಎಸ್‌ಐಟಿ ತನಿಖೆಯಿಂದ ಬೆಳಕಿಗೆ ಬಂದಿದೆ ಎಂದು ಹೇಳಿದ್ದಾರೆ.

<><><><>

ಕೋಲಾರ ಜಿಲ್ಲೆಯ ಮಾಲೂರು ವಿಧಾನಸಭಾ ಕ್ಷೇತ್ರದ ಮರು ಮತ ಎಣಿಕೆ ಇದೇ ೧೧ರಂದು ನಡೆಯಲಿದ್ದು, ವೀಕ್ಷಕರನ್ನಾಗಿ ಉತ್ತರ ಪ್ರದೇಶದ ಐಎಎಸ್ ಅಧಿಕಾರಿ ಪ್ರಭು ನಾರಾಯಣ ಸಿಂಗ್ ಅವರನ್ನು ಚುನಾವಣಾ ಆಯೋಗ ನೇಮಕ ಮಾಡಿದೆ. ಮರು ಎಣಿಕೆಗೆ ಸಂಬಂಧಿಸಿದಂತೆ ಚುನಾವಣಾ ಅಧಿಕಾರಿಯಾಗಿ ಕೋಲಾರ ಉಪವಿಭಾಗಾಧಿಕಾರಿ ಡಾ. ಹೆಚ್.ಪಿ.ಎಸ್.ಮೈತ್ರಿ ನೇಮಕಗೊಂಡಿದ್ದಾರೆ. ಸಹಾಯಕ ಚುನಾವಣಾಧಿಕಾರಿಗಳಾಗಿ ಶ್ರೀನಿವಾಸಪುರ, ಬಂಗಾರಪೇಟೆ, ಮುಳಬಾಗಿಲು ಮತ್ತು ಕೋಲಾರ ತಹಸೀಲ್ದಾರ್ ಅವರನ್ನು ನಿಯೋಜಿಸಲಾಗಿದೆ. ಎಣಿಕೆ ಕಾರ್ಯ ಇದೇ ೧೧ರಂದು ಬೆಳಿಗ್ಗೆ ೮ ಗಂಟೆಗೆ  ಕೋಲಾರದ ನಗರಕ್ಕೆ ಸಮೀಪದ ಟಮಕದ ತೋಟಗಾರಿಕೆ ಕಾಲೇಜಿನಲ್ಲಿ ನಡೆಯಲಿದೆ. ೧ ಸಾವಿರದ ೬೫೦ ಅಂಚೆ ಮತ ಪತ್ರಗಳಿದ್ದು ಅವುಗಳನ್ನು ನಾಲ್ಕು ಟೇಬಲ್‌ಗಳಲ್ಲಿ ಪ್ರತ್ಯೇಕವಾಗಿ ತಲಾ ೫೦೦ರಂತೆ ವಿಂಗಡಿಸಿ ಎಣಿಕೆ ಮಾಡಲಾಗುವುದು. ಪ್ರತಿ ಟೇಬಲ್‌ಗೂ ಒಬ್ಬ ತಹಸೀಲ್ದಾರ್ ನಿಯೋಜನೆಗೊಂಡಿದ್ದು, ಇವಿಎಂ ಮತ ಎಣಿಕೆ ೧೪ ಟೇಬಲ್‌ಗಳಲ್ಲಿ ಪ್ರತ್ಯೇಕವಾಗಿ ನಡೆಯಲಿದೆ. ಪ್ರತಿ ಟೇಬಲ್‌ಗೆ ಒಬ್ಬರು ಕೌಂಟಿಂಗ್ ಪರಿವೀಕ್ಷಕ ಹಾಗೂ ಸಹಾಯಕ ಸಿಬ್ಬಂದಿ ನಿಯೋಜಿಸಲಾಗಿದೆ.

<><><><>

ವಂದೇ ಮಾತರಂ ಗೀತೆಯಲ್ಲಿ ದೇಶ ಭಕ್ತಿ ಜಾಗೃತಗೊಳಿಸುವ ಶಕ್ತಿ ಇದ್ದು,  ವಂದೇ ಮಾತರಂ ಗೀತೆ ದೇಶದಾದ್ಯಂತ ಮೊಳಗಬೇಕಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಅಭಿಪ್ರಾಯಪಟ್ಟಿದ್ದಾರೆ. ಶಿರಸಿಯ ದೀನದಯಾಳ ಸಭಾಭವನದಲ್ಲಿ ವಂದೇ ಮಾತರಂ ೧೫೦ನೇ ವರ್ಷದ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವರ್ತಮಾನದಲ್ಲಿಯೂ ವಂದೇ ಮಾತರಂ ಶಕ್ತಿ ಜೊತೆಗೆ ಭವಿಷ್ಯದಲ್ಲಿ ಅಖಂಡತೆಯನ್ನು ರಕ್ಷಿಸಲಿದೆ. ಕೋಟಿ ಕೋಟಿ ಜನರನ್ನು ಒಗ್ಗೂಡಿಸುವುದರೊಂದಿಗೆ ಆಧ್ಯಾತ್ಮಿಕ ಜಾಗೃತಿಗೊಳಿಸುವ ಶಕ್ತಿಯನ್ನು ಹೊಂದಿದೆ ಎಂದು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>